**National**
**Kannada**
**03.09.2025 19.35 hrs**
ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು

ಮುಖ್ಯಾಂಶಗಳು

1. ಸೆಮಿಕಾನ್ ಇಂಡಿಯಾ - ೨೦೨೫ : ಸೆಮಿಕಾನ್ ಕ್ಷೇತ್ರದ ತಜ್ಞರೊಂದಿಗೆ ಪ್ರಧಾನಿ ಸಂವಾದ
2. ಡಿಜಿಟಲ್ ಯುಗದ ಕಲಿಕಾ ಸಂಪನ್ಮೂಲಗಳನ್ನು ಬಳಸಿಕೊಳ್ಳಲು ರಾಷ್ಟ್ರಪತಿ ದ್ರೌಪದಿ ಮುರ್ಮು ಕರೆ
3. ಭಾರತ-ಜರ್ಮನಿ ಬಾಹ್ಯಾಕಾಶ ಸಹಕಾರ ಚರ್ಚೆ ಫಲಪ್ರದ ; ವಿದೇಶಾಂಗ ಸಚಿವ ಡಾ. ಎಸ್. ಜೈಶಂಕರ್
4. ನಿರಂತರ ಮಳೆಯಿಂದ ತತ್ತರಿಸಿದ ಉತ್ತರ ಭಾರತ : ದೆಹಲಿಯಲ್ಲಿ ಜನಜೀವನ ಅಸ್ತವ್ಯಸ್ತ

<><><><>

ನವದೆಹಲಿಯ ಯಶೋಭೂಮಿಯಲ್ಲಿ ಇಂದು ಸೆಮಿಕಾನ್ ಇಂಡಿಯಾ ೨೦೨೫ ರ ಎರಡನೇ ದಿನದಂದು ಪ್ರಧಾನಿ ನರೇಂದ್ರ ಮೋದಿ ಅವರು ಸೆಮಿಕಾನ್ ಕ್ಷೇತ್ರದ ತಜ್ಞರೊಂದಿಗೆ ಸಂವಾದ ನಡೆಸಿದರು. ಅವರು ಪ್ರದರ್ಶನಕ್ಕೆ ಭೇಟಿ ನೀಡಿ ಸೆಮಿಕಂಡಕ್ಟರ್‌ಗೆ ಸಂಬಂಧಿಸಿದ ವಿವಿಧ ಉತ್ಪನ್ನಗಳು ಮತ್ತು ಯೋಜನೆಗಳನ್ನು ವೀಕ್ಷಿಸಿದರು. ವಿದ್ಯುನ್ಮಾನ ಮತ್ತು ಮಾಹಿತಿ ತಂತ್ರಜ್ಞಾನ ಸಚಿವ ಅಶ್ವಿನಿ ವೈಷ್ಣವ್ ಕೂಡ ಈ ಸಂದರ್ಭದಲ್ಲಿ ಉಪಸ್ಥಿತರಿದ್ದರು. ಅವರು ಇಂದು ಮಧ್ಯಾಹ್ನ ಸೆಮಿಕಾನ್ ಇಂಡಿಯಾದಲ್ಲಿ ನಡೆದ ಜಗತ್ತಿನಾದ್ಯಂತದ ಉದ್ಯಮ ನಾಯಕರು ಮತ್ತು ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳ ದುಂಡುಮೇಜಿನ ಸಭೆಯಲ್ಲಿ ಭಾಗವಹಿಸಿದರು. ೩ ದಿನಗಳ ಸೆಮಿಕಾನ್ ಇಂಡಿಯಾ ೨೦೨೫ ಸಮ್ಮೇಳನವನ್ನು ಪ್ರಧಾನಿ ಮೋದಿ ನಿನ್ನೆ ಉದ್ಘಾಟಿಸಿದರು. ಜಾಗತಿಕ ಸೆಮಿಕಂಡಕ್ಟರ್ ಪೂರೈಕೆ ಸರಪಳಿಯಲ್ಲಿ ಭಾರತವನ್ನು ವಿಶ್ವಾಸಾರ್ಹ ಪಾಲುದಾರನನ್ನಾಗಿ ಮಾಡುವ ಗುರಿಯನ್ನು ಈ ಸಮ್ಮೇಳನ ಹೊಂದಿದೆ.

ಸೆಮಿಕಾನ್ ಇಂಡಿಯಾ ೨೦೨೫ ಸಮ್ಮೇಳನವು ಸೆಮಿಕಂಡಕ್ಟರ್ ವಿನ್ಯಾಸ, ಉತ್ಪಾದನೆ ಮತ್ತು ತಂತ್ರಜ್ಞಾನ ಅಭಿವೃದ್ಧಿಯ ಕೇಂದ್ರವಾಗುವ ಭಾರತದ ಗುರಿಯನ್ನು ಸಾಕಾರಗೊಳಿಸುವ ಮಹತ್ವದ ಹೆಜ್ಜೆಯಾಗಿದೆ.

<><><><>

ಡಿಜಿಟಲ್ ಯುಗದಲ್ಲಿ ಲಭ್ಯವಿರುವ ಅಗಾಧ ಕಲಿಕಾ ಸಂಪನ್ಮೂಲಗಳನ್ನು ಬಳಸಿಕೊಳ್ಳಬೇಕು. ದೇಶದ ಕೈಗಾರಿಕೆಗಳು ೪.೦ ಗೆ ಸಿದ್ಧವಾಗಿದ್ದು, ವಿದ್ಯಾರ್ಥಿಗಳು ಅದರ ಗರಿಷ್ಠ ಪ್ರಯೋಜನವನ್ನು ಪಡೆಯಬಹುದು ಎಂದು ರಾಷ್ಟ್ರಪತಿ ದ್ರೌಪದಿ ಮುರ್ಮು ಕರೆ ನೀಡಿದ್ದಾರೆ. ತಿರುವರೂರಿನ ತಮಿಳುನಾಡು ಕೇಂದ್ರ ವಿಶ್ವವಿದ್ಯಾಲಯದಲ್ಲಿ ಇಂದು ನಡೆದ ಘಟಿಕೋತ್ಸವ ಸಮಾರಂಭದಲ್ಲಿ ಮಾತನಾಡಿದ ಅವರು, ಮಾಜಿ ರಾಷ್ಟ್ರಪತಿ ಡಾ. ರಾಧಾಕೃಷ್ಣನ್ ಅವರನ್ನು ಉಲ್ಲೇಖಿಸಿ, ಶಿಕ್ಷಣದ ಮಹತ್ವವೆಂದರೆ ಕಲಿಕೆಯನ್ನು ಮುಂದುವರಿಸುವುದು ಮತ್ತು ಜ್ಞಾನ ಮತ್ತು ಬುದ್ಧಿವಂತಿಕೆಯನ್ನು ಅಭಿವೃದ್ಧಿಪಡಿಸುವುದು. ಹೊಸ ಶಿಕ್ಷಣ ನೀತಿಯನ್ನು ಮರುಶೋಧಿಸಲು ಮತ್ತು ಸಮಾಜದ ಬೆಳವಣಿಗೆಗೆ ಕ್ರಿಯಾತ್ಮಕ ರೀತಿಯಲ್ಲಿ ತಮ್ಮ ಕೊಡುಗೆಯನ್ನು ನೀಡಲು ಅವರು ವಿದ್ಯಾರ್ಥಿಗಳನ್ನು ಒತ್ತಾಯಿಸಿದರು.

ಶಿಕ್ಷಕಿಯಾಗಿ ತಮ್ಮ ಕೆಲಸವನ್ನು ನೆನಪಿಸಿಕೊಂಡ ರಾಷ್ಟ್ರಪತಿಗಳು, ಒಮ್ಮೆ ಶಿಕ್ಷಕಿ ಅಂದರೆ ಯಾವಾಗಲೂ ಶಿಕ್ಷಕಿ. ಕೇಂದ್ರೀಯ ವಿಶ್ವವಿದ್ಯಾಲಯವು ಉನ್ನತ ಮಟ್ಟದ ಶಿಕ್ಷಣವನ್ನು ಕಾಯ್ದುಕೊಳ್ಳುತ್ತಿದೆ. ವಿದ್ಯಾರ್ಥಿಗಳು ಭವಿಷ್ಯದ ವಿದ್ಯಾವಂತ ನಾಗರಿಕರಾಗಲು ಅನುವು ಮಾಡಿಕೊಡುವ ಶಿಕ್ಷಣ ಜಾಲವನ್ನು ವಿಶ್ವವಿದ್ಯಾಲಯವು ಗ್ರಾಮೀಣ ಮತ್ತು ಅಂಚಿನ ಪ್ರದೇಶಗಳಿಗೆ ವಿಸ್ತರಿಸಿದೆ ಎಂದು ಅವರು ಹೇಳಿದರು. ಚಿನ್ನದ ಪದಕಗಳಲ್ಲಿ ಮೂರನೇ ಎರಡರಷ್ಟು ಪಡೆದಿದ್ದಕ್ಕಾಗಿ ಅವರು ವಿದ್ಯಾರ್ಥಿನಿಯರನ್ನು ಶ್ಲಾಘಿಸಿದರು.

<><><><>

ಭಾರತ ಮತ್ತು ಜರ್ಮನಿ ನಡುವಿನ ಬಾಹ್ಯಾಕಾಶ ಸಹಕಾರವನ್ನು ಬಲಗೊಳಿಸುವ ಬಗ್ಗೆ ಹಾಗೂ ಯುರೋಪಿಯನ್ ಒಕ್ಕೂಟದೊಂದಿಗಿನ ಸಂಬಂಧದ ಕುರಿತು ಫಲಪ್ರದ ಚರ್ಚೆಯನ್ನು ಪೂರ್ಣಗೊಳಿಸಲಾಗಿದೆ ಎಂದು ವಿದೇಶಾಂಗ ಸಚಿವ ಡಾ. ಎಸ್. ಜೈಶಂಕರ್ ಹೇಳಿದ್ದಾರೆ. ನವದೆಹಲಿಯಲ್ಲಿ ಇಂದು ಅವರು, ಜರ್ಮನ್ ವಿದೇಶಾಂಗ ಸಚಿವ ಜೋಹಾನ್ ಡೇವಿಡ್ ವಾಡೆಫುಲ್ ಅವರೊಂದಿಗೆ ಮಾತುಕತೆ ನಡೆಸಿದ ಬಳಿಕ, ಸುದ್ದಿಗಾರರೊಂದಿಗೆ ಮಾತನಾಡಿ, ಪ್ರಾದೇಶಿಕ, ಜಾಗತಿಕ ಮತ್ತು ಬಹುಪಕ್ಷೀಯ ವಿಷಯಗಳ ಕುರಿತು ಅವರು ಅಭಿಪ್ರಾಯಗಳನ್ನು ವಿನಿಮಯ ಮಾಡಿಕೊಂಡಿದ್ದಾರೆ ಎಂದು ಅವರು ಹೇಳಿದರು.

ಧ್ವನಿ : ಡಾ. ಎಸ್. ಜೈಶಂಕರ್

ಇದಕ್ಕೂ ಮೊದಲು, ತಮ್ಮ ಆರಂಭಿಕ ಭಾಷಣದಲ್ಲಿ, ಡಾ. ಜೈಶಂಕರ್ ಅವರು ಯುರೋಪಿಯನ್ ಒಕ್ಕೂಟದೊಂದಿಗೆ ಭಾರತದ ಸಂಬಂಧವನ್ನು ಗಾಢವಾಗಿಸಲು ಮತ್ತು ಮುಕ್ತ ವ್ಯಾಪಾರ ಒಪ್ಪಂದದ ಮಾತುಕತೆಗಳನ್ನು ತ್ವರಿತಗೊಳಿಸಲು ಜರ್ಮನ್ ಬೆಂಬಲವನ್ನು ಕೋರಿದರು. ಎರಡೂ ದೇಶಗಳ ನಡುವಿನ ದ್ವಿಪಕ್ಷೀಯ ಸಹಕಾರದ ವಿವಿಧ ಆಯಾಮಗಳ ಕುರಿತು ಆಳವಾದ ಚರ್ಚೆಯನ್ನು ಎದುರು

ನೋಡುತ್ತಿದ್ದು, ಭಾರತ ಮತ್ತು ಜರ್ಮನಿ ೨೫ ವರ್ಷಗಳ ಕಾರ್ಯತಂತ್ರದ ಪಾಲುದಾರಿಕೆ, ೫೦ ವರ್ಷಗಳ ವೈಜ್ಞಾನಿಕ ಸಹಕಾರ, ಸುಮಾರು ೬೦ ವರ್ಷಗಳ ಸಾಂಸ್ಕೃತಿಕ ಒಪ್ಪಂದಗಳನ್ನು ಆಚರಿಸುತ್ತಿವೆ ಎಂದು ಡಾ. ಜೈಶಂಕರ್ ಹೇಳಿದ್ದಾರೆ.

<><><><>

ಉತ್ತರ ಭಾರತದಾದ್ಯಂತ ನಿರಂತರ ಮಳೆಯಿಂದಾಗಿ ಪಂಜಾಬ್, ಜಮ್ಮುಕಾಶ್ಮೀರ ಹಿಮಾಚಲ ಪ್ರದೇಶದಲ್ಲಿ ಪ್ರವಾಹ ಪರಿಸ್ಥಿತಿ ಉಲ್ಬಣಗೊಂಡಿದೆ. ಪಂಜಾಬ್‌ನಲ್ಲಿ ೫ ಸಾವಿರದ ೫೦೦ಕ್ಕೂ ಹೆಚ್ಚು ನಾಗರಿಕರು ಮತ್ತು ೩೦೦ ಅರೆಸೈನಿಕ ಪಡೆಗಳ ಸಿಬ್ಬಂದಿಯನ್ನು ರಕ್ಷಿಸಲಾಗಿದೆ, ೩ ಸಾವಿರಕ್ಕೂ ಹೆಚ್ಚು ನಾಗರಿಕರಿಗೆ ವೈದ್ಯಕೀಯ ನೆರವು ನೀಡಲಾಗಿದೆ. ೨೬ ಟನ್ ಪಡಿತರ ಮತ್ತು ಅಗತ್ಯ ಸಾಮಗ್ರಿಗಳನ್ನು ಪ್ರವಾಹ ಪೀಡಿತ ಪ್ರದೇಶಗಳಿಗೆ ತಲುಪಿಸಲಾಗಿದೆ ಎಂದು ಸೇನೆ ತಿಳಿಸಿದೆ. ಪಂಜಾಬ್‌ನಲ್ಲಿ, ಭಕ್ರಾ ಸೇರಿದಂತೆ ಅಣೆಕಟ್ಟುಗಳು ತುಂಬಿ ತುಳುಕುತ್ತಿವೆ. ಜಮ್ಮು ಮತ್ತು ಕಾಶ್ಮೀರದಲ್ಲಿ, ಹೆಚ್ಚುತ್ತಿರುವ ನೀರಿನ ಮಟ್ಟವನ್ನು ನಿರ್ವಹಿಸಲು ಅಧಿಕಾರಿಗಳು ರಿಯಾಸಿ ಜಿಲ್ಲೆಯ ಸಲಾಲ್ ಅಣೆಕಟ್ಟಿನ ಎಲ್ಲಾ ಗೇಟ್‌ಗಳನ್ನು ತೆರೆದಿದ್ದಾರೆ. ದೆಹಲಿ ಮತ್ತು ರಾಷ್ಟ್ರೀಯ ರಾಜಧಾನಿ ಪ್ರದೇಶದಲ್ಲಿ ಕೂಡ ಪ್ರವಾಹದ ನೀರಿನ ಏರಿಕೆಯಿಂದಾಗಿ ದೈನಂದಿನ ಜನ ಜೀವನ ಅಸ್ತವ್ಯಸ್ತಗೊಂಡಿದೆ.

<><><><>

ಜಿಎಸ್‌ಟಿ ಕೌನ್ಸಿಲ್‌ನ ೫೬ನೇ ಸಭೆ ಇಂದು ನವದೆಹಲಿಯಲ್ಲಿ ನಡೆಯುತ್ತಿದೆ. ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಎರಡು ದಿನಗಳ ಸಭೆಯ ಅಧ್ಯಕ್ಷತೆ ವಹಿಸಿದ್ದಾರೆ. ತೆರಿಗೆ ದರಗಳ ತರ್ಕಬದ್ಧಗೊಳಿಸುವಿಕೆ ಮತ್ತು ಅನುಸರಣೆಯ ಸರಳೀಕರಣ ಸೇರಿದಂತೆ ಭಾರತದ ಮುಂದಿನ ಪೀಳಿಗೆಯ ಜಿಎಸ್‌ಟಿ ಸುಧಾರಣೆಗಳ ಕುರಿತು ಕೌನ್ಸಿಲ್ ಚರ್ಚಿಸುವ ನಿರೀಕ್ಷೆಯಿದೆ. ಕೇಂದ್ರ ಹಣಕಾಸು ರಾಜ್ಯ ಸಚಿವ ಪಂಕಜ್ ಚೌಧರಿ, ದೆಹಲಿ, ಗೋವಾ, ಹರಿಯಾಣ, ಜಮ್ಮು ಮತ್ತು ಕಾಶ್ಮೀರ, ಮೇಘಾಲಯ ಮತ್ತು ಒಡಿಶಾದ ಮುಖ್ಯಮಂತ್ರಿಗಳು ಸಭೆಯಲ್ಲಿದ್ದಾರೆ. ಅರುಣಾಚಲ ಪ್ರದೇಶ, ಬಿಹಾರ, ಮಧ್ಯಪ್ರದೇಶ ಮತ್ತು ತೆಲಂಗಾಣದ ಉಪಮುಖ್ಯಮಂತ್ರಿಗಳು, ಮಣಿಪುರದ ರಾಜ್ಯಪಾಲರು ಮತ್ತು ಹಲವಾರು ರಾಜ್ಯಗಳು ಮತ್ತು ಕೇಂದ್ರಾಡಳಿತ ಪ್ರದೇಶಗಳ ಹಣಕಾಸು ಸಚಿವರು ಸಹ ಸಭೆಯಲ್ಲಿ ಭಾಗವಹಿಸುತ್ತಿದ್ದಾರೆ.

<><><><>

ಸುಸ್ಥಿರ ರಾಷ್ಟ್ರೀಯ ಹೆದ್ದಾರಿ ಅಭಿವೃದ್ಧಿಗಾಗಿ ನವೀನ ನೀತಿ ಮಧ್ಯಸ್ಥಿಕೆಗಳ ಕುರಿತು ನವದೆಹಲಿಯಲ್ಲಿ ಇಂದು ನಡೆದ ಸಮಾಲೋಚನಾ ಕಾರ್ಯಾಗಾರದ ಅಧ್ಯಕ್ಷತೆಯನ್ನು ರಸ್ತೆ ಸಾರಿಗೆ ಮತ್ತು ಹೆದ್ದಾರಿ ಸಚಿವ ನಿತಿನ್ ಗಡ್ಕರಿ ವಹಿಸಿದ್ದರು. ವೇಗವಾಗಿ ಬೆಳೆಯುತ್ತಿರುವ ನಗರ ಪ್ರದೇಶಗಳಲ್ಲಿ ದಟ್ಟಣೆಯನ್ನು ಕಡಿಮೆ ಮಾಡುವತ್ತ ವಿಶೇಷ ಗಮನ ಹರಿಸಿ, ವಿಶ್ವ ದರ್ಜೆಯ, ಸುಸ್ಥಿರ ಮತ್ತು ಭವಿಷ್ಯಕ್ಕೆ ಸಿದ್ಧವಾದ

ಸಾರಿಗೆ ಮೂಲಸೌಕರ್ಯವನ್ನು ರಚಿಸುವ ಸರ್ಕಾರದ ಬದ್ಧತೆಯನ್ನು ಕಾರ್ಯಾಗಾರವು ಎತ್ತಿ ತೋರಿಸಿತು.  ಕಾರ್ಯಾಗಾರದಲ್ಲಿ ರಾಜ್ಯ ಸಚಿವರಾದ ಅಜಯ್ ತಮ್ಟಾ ಮತ್ತು ಹರ್ಷ್ ಮಲ್ಹೋತ್ರಾ, ಹಿರಿಯ ರಾಜ್ಯ ಸರ್ಕಾರಿ ಅಧಿಕಾರಿಗಳು ಮತ್ತು ಪುರಸಭೆ ಆಯುಕ್ತರು ಭಾಗವಹಿಸಿದ್ದರು.

<><><>

ಭದ್ರಾವತಿ ಉಕ್ಕು ಕಾರ್ಖಾನೆಯ ಪುನಶ್ಚೇತನ ಕಾರ್ಯ ಪ್ರಗತಿಯಲ್ಲಿದೆ ಎಂದು ಕೇಂದ್ರ ಉಕ್ಕು ಹಾಗೂ ಬೃಹತ್ ಕೈಗಾರಿಕಾ ಸಚಿವ ಹೆಚ್.ಡಿ ಕುಮಾರಸ್ವಾಮಿ ತಿಳಿಸಿದ್ದಾರೆ. ನವದೆಹಲಿಯಲ್ಲಿಂದು ನಡೆದ ಸಭೆಯಲ್ಲಿ ಈ ಮಹತ್ವದ ತೀರ್ಮಾನ ಕೈಗೊಳ್ಳಲಾಗಿದೆ. ವಿಐಎಸ್‌ಎಲ್ ನಲ್ಲಿ, ಹಂತ ಹಂತದ ಆಧುನೀಕರಣ, ಮತ್ತು ಫೋರ್ಜಿಂಗ್ ಪ್ರಯೋಗಗಳ ಮೂಲಕ ಪುನರುಜ್ಜೀವನ ಕಾರ್ಯ ಪ್ರಾರಂಭವಾಗಿದೆ ಎಂದು ಸಾಮಾಜಿಕ ಜಾಲ ತಾಣದಲ್ಲಿ ಹೇಳಿದ್ದಾರೆ.

<><><>

ಮಹಾರಾಷ್ಟ್ರದ ಪಾಲ್ಘರ್ ಜಿಲ್ಲೆಯಲ್ಲಿ ಕಟ್ಟಡ ಕುಸಿದು ಹದಿನೇಳು ಜನರು ಸಾವನ್ನಪ್ಪಿದ ಘಟನೆಗೆ ಸಂಬಂಧಿಸಿದಂತೆ ರಾಷ್ಟ್ರೀಯ ಮಾನವ ಹಕ್ಕುಗಳ ಆಯೋಗ ಮಹಾರಾಷ್ಟ್ರದ ಮುಖ್ಯ ಕಾರ್ಯದರ್ಶಿ ಮತ್ತು ಪೊಲೀಸ್ ಮಹಾನಿರ್ದೇಶಕರಿಗೆ ನೋಟಿಸ್ ಜಾರಿ ಮಾಡಿದೆ. ಮಾಧ್ಯಮ ವರದಿಗಳನ್ನು ಸ್ವಯಂಪ್ರೇರಿತವಾಗಿ ಪರಿಗಣಿಸಿ, ಆಯೋಗವು ಎರಡು ವಾರಗಳಲ್ಲಿ ವಿವರವಾದ ವರದಿಯನ್ನು ಕೋರಿದೆ. ಸುದ್ದಿ ವರದಿಯ ವಿಷಯಗಳು ನಿಜವಾಗಿದ್ದರೆ, ಅದು ಮಾನವ ಹಕ್ಕುಗಳ ಉಲ್ಲಂಘನೆಯ ಗಂಭೀರ ಸಮಸ್ಯೆಗಳನ್ನು ಹುಟ್ಟುಹಾಕುತ್ತದೆ ಎಂದು ಆಯೋಗ ತಿಳಿಸಿದೆ.  ಘಟನೆಯಲ್ಲಿ ಹದಿನೇಳು ಜನರು ಸಾವನ್ನಪ್ಪಿದ್ದು, ಎಂಟು ಜನರು ಗಾಯಗೊಂಡಿದ್ದಾರೆ ಎಂದು ಮಾಧ್ಯಮ ವರದಿಗಳು ಉಲ್ಲೇಖಿಸಿವೆ. ಕಳಪೆ-ಗುಣಮಟ್ಟದ ನಿರ್ಮಾಣ ಸಾಮಗ್ರಿಗಳ ಬಳಕೆಯಿಂದಾಗಿ ಕಟ್ಟಡ ಕುಸಿದಿರಬಹುದು ಎಂದು ಆಯೋಗ ಶಂಕಿಸಿದೆ.

<><><>

ಸರ್ಕಾರ ಕೇವಲ ಹೊರರೋಗಿ ಚಿಕಿತ್ಸಾ ಸೇವೆಗಳಿಗೆ ಸೀಮಿತವಾಗದೇ ರೋಗಗಳ ಕುರಿತು ಮಾಹಿತಿ ಹಾಗೂ ಕಾಯಿಲೆಗಳನ್ನು ತಡೆಗಟ್ಟುವ ನಿಟ್ಟಿನಲ್ಲಿ ಗಮನ ಹರಿಸುತ್ತಿದೆ ಎಂದು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಖಾತೆ ರಾಜ್ಯ ಸಚಿವ ಪ್ರತಾಪ್‌ರಾವ್ ಜಾಧವ್ ಹೇಳಿದರು. ರಾಷ್ಟ್ರೀಯ ಆಯುಷ್ ಮಿಷನ್‌ನ ಇಲಾಖಾ ಶೃಂಗಸಭೆಯನ್ನುದ್ದೇಶಿಸಿ ಮಾತನಾಡಿದ ಅವರು, ಸುಮಾರು ೧೨ ಸಾವಿರದ ೫೦೦ ಆಯುಷ್ಮಾನ್ ಆರೋಗ್ಯ ಕೇಂದ್ರ ಸ್ಥಾಪನೆಯು ಹೊರರೋಗಿ ಚಿಕಿತ್ಸಾ ಆಧಾರಿತ ಚಿಕಿತ್ಸೆಯಿಂದ ರೋಗಗಳ ಕುರಿತು ಮಾಹಿತಿ ಹಾಗೂ ಕಾಯಿಲೆಗಳನ್ನು ತಡೆಗಟ್ಟುವ ಸಮಗ್ರ ಆರೋಗ್ಯ ರಕ್ಷಣೆಯ ಮಾದರಿಯತ್ತ ಗಮನ ಹರಿಸಿದೆ ಎಂದು ಹೇಳಿದರು.  ಇದೇ ತಿಂಗಳ ೨೩ರಂದು ನಡೆಯಲಿರುವ ಆಯುರ್ವೇದ ದಿವಸ್ ಕುರಿತು ಮಾತನಾಡಿದ ಅವರು, ಈ ವರ್ಷದ ಧ್ಯೇಯವಾಕ್ಯ - 'ಜನರು ಮತ್ತು ಗ್ರಹಕ್ಕಾಗಿ ಆಯುರ್ವೇದ' ಪರಿಸರ ಸಮತೋಲನ, ಸುಸ್ಥಿರತೆ ಮತ್ತು ಉತ್ತಮ

ವೈಯಕ್ತಿಕ ಆರೋಗ್ಯವನ್ನು ಖಾತ್ರಿಪಡಿಸುವಲ್ಲಿ ಆಯುರ್ವೇದದ ಪ್ರಸ್ತುತತೆಯನ್ನು ಒತ್ತಿ ಹೇಳುತ್ತದೆ ಎಂದು ಹೇಳಿದರು. ಎಲ್ಲಾ ರಾಜ್ಯಗಳು ಮತ್ತು ಕೇಂದ್ರಾಡಳಿತ ಪ್ರದೇಶಗಳು ಸಕ್ರಿಯವಾಗಿ ಭಾಗವಹಿಸಿ ಆಯುರ್ವೇದದ ಮೂಲ ಸಂದೇಶವನ್ನು ಜನಸಾಮಾನ್ಯರಿಗೆ ಹರಡುವಂತೆ ಅವರು ಒತ್ತಾಯಿಸಿದರು.

<><> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <><>